# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆರಡನೆಯ ಅಧಿವೇಶನ

### ಸಂತಾಪ ಸೂಚನೆಗಳು

ಮಾನ್ಯ ಸಭಾಪತಿಯವರು:

ವಿಧಾನ ಪರಿಷತ್ತಿನ ಮಾಜಿ ಶಾಸಕರುಗಳಾಗಿದ್ದ ಮಾರುತಿರಾವ್ ಡಿ ಮಾಲೆ ಹಾಗೂ ಎಸ್.ಎ.ಜಿದ್ದಿ, ಹಿರಿಯ ಗಾಂಧಿವಾದಿ ಹಾಗೂ ಸರ್ವೋದಯ ಕಾರ್ಯಕರ್ತೆ ಶ್ರೀಮತಿ ಚನ್ನಮ್ಮ ಹಳ್ಳಿಕೇರಿ, ಜಾನಪದ ವಿದ್ವಾಂಸರಾದ ಡಾ:ಅಮೃತ ಸೋಮೇಶ್ವರ ಹಾಗೂ ಕರಡಿ ಮಜಲು ಕಲಾವಿದರಾದ ಗುರುಲಿಂಗಪ್ಪ ವೀರಸಂಗಪ್ಪ ಕರಡಿ ಅವರುಗಳು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.

### 01. ಮಾರುತಿರಾವ್ ಡಿ. ಮಾಲೆ

ವಿಧಾನ ಪರಿಷತ್ತಿನ ಮಾಜಿ ಶಾಸಕರಾಗಿದ್ದ ಮಾರುತಿರಾವ್ ಡಿ. ಮಾಲೆ ಅವರು ದಿನಾಂಕ:26.12.2023ರಂದು ನಿಧನ ಹೊಂದಿರುತ್ತಾರೆ.

1939ರ ಏಪ್ರಿಲ್, 27ರಂದು ಬೀದರ್ ಜಿಲ್ಲೆಯ ಹುಮ್ನಾಬಾದ್ ತಾಲ್ಲೂಕಿನ ಘಾಟ್ಬೋರಲ್ ಗ್ರಾಮದಲ್ಲಿ ಜನಿಸಿದ್ದ ಶ್ರೀಯುತರು ಬಿ.ಎ. ಹಿಂದಿ ಸಾಹಿತ್ಯ ರತ್ನ ವಿದ್ಯಾರ್ಹತೆ ಹೊಂದಿದ್ದು, ವೃತ್ತಿಯಲ್ಲಿ ಕೃಷಿಕರಾಗಿದ್ದರು. ಗುಲ್ಬರ್ಗಾ ಜಿಲ್ಲಾ ಕಾಂಗ್ರೆಸ್ ಸಮಿತಿಯ ಉಪಾಧ್ಯಕ್ಷರಾಗಿ, ಹೈದರಾಬಾದ್ ಕರ್ನಾಟಕ ಎಸ್.ಸಿ/ಎಸ್.ಟಿ. ಯೂನಿಯನ್ ಅಧ್ಯಕ್ಷರಾಗಿ, ಕರ್ನಾಟಕ ಪ್ರದೇಶ ಕಾಂಗ್ರೆಸ್ ಯೂನಿಯನ್ ಕಾರ್ಯದರ್ಶಿಯಾಗಿ, ರಾಜ್ಯ ಪಟ್ಟಣ ಯೋಜನಾ ಮಂಡಳಿಯ ಸದಸ್ಯರಾಗಿ, ಕರ್ನಾಟಕ ಪೀಪಲ್ಸ್ ಎಜುಕೇಷನ್ ಸೊಸೈಟಿಯ ಸಂಸ್ಥಾಪಕ ಪ್ರಧಾನ ಕಾರ್ಯದರ್ಶಿಯಾಗಿ ಹಾಗೂ ಶ್ರೀ ಸಿದ್ಧಾರ್ಥ ಎಜುಕೇಷನ್ ಸೊಸೈಟಿಯ ಅಧ್ಯಕ್ಷರಾಗಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿರುತ್ತಾರೆ. ರಾಷ್ಟ್ರ ಏಕೀಕರಣ ಸಂದರ್ಭದಲ್ಲಿ ಏಕೀಕರಣ ವಿರೋಧಿಸಿದ ನಿಜಾಮರ ವಿರುದ್ಧ ಹೋರಾಟ ನಡೆಸಿದ್ದರು. 2000–2006ರ ಅವಧಿಗೆ ವಿಧಾನ ಪರಿಷತ್ತಿನ ಸದಸ್ಯರಾಗಿ ಸೇವೆ ಸಲ್ಲಿಸಿದ್ದರು. ಗುಲ್ಬರ್ಗಾದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಶಾಸನ ಸಮಿತಿಯ ಜಂಟಿ ಕಾರ್ಯದರ್ಶಿಯಾಗಿದ್ದ ಶ್ರೀಯುತರು ಅವರ ಪ್ರತಿಮೆಯನ್ನು ಗುಲ್ಬರ್ಗಾದಲ್ಲಿ ಸ್ಥಾಪಿಸಿದರು.

ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ರಾಜಕಾರಣಿ ಹಾಗೂ ಸಮಾಜ ಸೇವಕರೊಬ್ಬರನ್ನು ಕಳೆದುಕೊಂಡಂತಾಗಿದೆ.

**02. ಎಸ್.ಎ.ಜಿದ್ದಿ**

**ವಿಧಾನ ಪರಿಷತ್ತಿನ ಮಾಜಿ ಶಾಸಕರಾಗಿದ್ದ ಎಸ್.ಎ. ಜಿದ್ದಿ ಅವರು ದಿನಾಂಕ:10.02.2024ರಂದು ನಿಧನ ಹೊಂದಿರುತ್ತಾರೆ.**

1944ನೇ ಜೂನ್, 06ರಂದು ಬಿಜಾಪುರ ಜಿಲ್ಲೆಯ ಕೋಟ್ಯಾಳದಲ್ಲಿ ಜನಿಸಿದ್ದ ಶ್ರೀಯುತರು ಎಂ.ಎಸ್ಸಿ, ಪದವೀಧರರಾಗಿದ್ದು, ವೃತ್ತಿಯಲ್ಲಿ ಕೃಷಿಕರಾಗಿದ್ದರು. ಹಿಂದುಳಿದ ವರ್ಗಗಳ ಅಗ್ರಗಣ್ಯ ನಾಯಕರಾಗಿದ್ದ ಶ್ರೀಯುತರು ಹಿಂದುಳಿದ ವರ್ಗಗಳಿಗೆ ಸಾಮಾಜಿಕ, ಶೈಕ್ಷಣಿಕ ಮತ್ತು ರಾಜಕೀಯ ಶಕ್ತಿಯನ್ನು ತುಂಬುವಲ್ಲಿ ಶ್ರಮಿಸಿದ್ದರು. 1994ರಲ್ಲಿ ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾಗಿ ಸೇವೆಯನ್ನು ಸಲ್ಲಿಸಿದ್ದ ಶ್ರೀಯುತರು ಶೈಕ್ಷಣಿಕ ರಂಗದಲ್ಲಿ ಅಪಾರ ಆಸಕ್ತಿಯನ್ನು ಹೊಂದಿದ್ದರು. ವಿಜಯಪುರ ನಗರದ ಕಾಳಿದಾಸ ಶಿಕ್ಷಣ ಸಂಸ್ಥೆಯ ಅಡಿಯಲ್ಲಿ ಶಾಲೆ, ಕಾಲೇಜು, ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಿದ ಕೀರ್ತಿಗೆ ಭಾಜನರಾಗಿದ್ದರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ರಾಜಕಾರಣಿ ಹಾಗೂ ಹಿಂದುಳಿದ ವರ್ಗಗಳ ನೇತಾರರೊಬ್ಬರನ್ನು ಕಳೆದುಕೊಂಡಂತಾಗಿದೆ.**

**03. ಚನ್ನಮ್ಮ ಹಳ್ಳಿಕೇರಿ**

**ಹಿರಿಯ ಗಾಂಧಿವಾದಿ ಹಾಗೂ ಸರ್ವೋದಯ ಕಾರ್ಯಕರ್ತೆಯಾದ ಚನ್ನಮ್ಮ ಹಳ್ಳಿಕೇರಿ ಅವರು ದಿನಾಂಕ:20.12.2023ರಂದು ನಿಧನ ಹೊಂದಿರುತ್ತಾರೆ.**

**1931ರಲ್ಲಿ ಹಾವೇರಿ ಜಿಲ್ಲೆ, ಹಾವೇರಿ ತಾಲ್ಲೂಕಿನ ಹೊಸರಿತ್ತಿ ಗ್ರಾಮದಲ್ಲಿ ಜನಿಸಿದ್ದ ಶ್ರೀಯುತರು ವಿನೋಭಾ ಬಾವೆ ಮತ್ತು ಮಹಾತ್ಮ ಗಾಂಧಿಯವರ ಆದರ್ಶಗಳಿಂದ ಪ್ರಭಾವಿತರಾಗಿದ್ದು, ಭೂದಾನ ಚಳುವಳಿ, ಸರ್ವೋದಯ ವಿಚಾರ ಪ್ರಸಾರ, ಅಸ್ಪೃಶ್ಯತೆ ನಿವಾರಣೆ, ಗ್ರಾಮೀಣ ನೈರ್ಮಲ್ಯ, ಹರಿಜನೋದ್ಧಾರ, ಮಹಿಳಾ ಸಬಲೀಕರಣ ಮುಂತಾದ ಚಳುವಳಿಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು. ಶ್ರೀಯುತರು ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದರು.**

ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಗಾಂಧಿವಾದಿ ಹಾಗೂ ಹೋರಾಟಗಾರ್ತಿಯೊಬ್ಬರನ್ನು ಕಳೆದುಕೊಂಡಂತಾಗಿದೆ.

**04. ಡಾ: ಅಮೃತ ಸೋಮೇಶ್ವರ**

ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿ ಅನನ್ಯ ಸಾಧಕರಾಗಿದ್ದ ಡಾ: ಅಮೃತ ಸೋಮೇಶ್ವರ ಅವರು ದಿನಾಂಕ:06.01.2024ರಂದು ನಿಧನ ಹೊಂದಿರುತ್ತಾರೆ.

1935ರ ಸೆಪ್ಟೆಂಬರ್, 27ರಂದು ಮಂಗಳೂರು ಸಮೀಪದ ಕೋಟೆಕಾರು ಗ್ರಾಮದ ಅಡ್ಕ ಎಂಬಲ್ಲಿ ಜನಿಸಿದ್ದ ಶ್ರೀಯುತರು ಕೋಟೇಕಾರಿನ ಸ್ಟೆಲ್ಲಾ ಮೇರೀಸ್ ಕಾನ್ವೆಂಟ್‌ನಲ್ಲಿ ಪ್ರಾಥಮಿಕ ಶಿಕ್ಷಣ ಪಡೆದು ಕರ್ನಾಟಕ ವಿಶ್ವವಿದ್ಯಾಲಯದಿಂದ ಎಂ.ಎ. ಪದವಿ ಪಡೆದಿದ್ದರು. ಮಾತೃ ಭಾಷೆ ಮಲಾಯಳಂ ಆಗಿದ್ದರೂ ಕನ್ನಡ ಮತ್ತು ತುಳು ಸಾಹಿತ್ಯದಲ್ಲಿ ಕೃಷಿ ಮಾಡಿ, ಅಲೋಷಿಯಸ್ ಕಾಲೇಜಿನ ಕನ್ನಡ ಪ್ರಾಧ್ಯಾಪಕರಾಗಿ, ಪುತ್ತೂರಿನ ಸೆಂಟ್ ಫಿಲೋಮಿನಾ ಕಾಲೇಜಿನಲ್ಲಿ ಉಪನ್ಯಾಸಕರಾಗಿ, ವಿವೇಕಾನಂದ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥರಾಗಿ ಸೇವೆಸಲ್ಲಿಸಿದ್ದ ಶ್ರೀಯುತರು ಮಂಗಳೂರು ವಿಶ್ವವಿದ್ಯಾಲಯದ ಆಹ್ವಾನಿತ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸಿದ್ದರು. ಕನ್ನಡ ಮತ್ತು ತುಳು ಭಾಷೆಯ ಉನ್ನತಿಗಾಗಿ ಸಮರ್ಪಿಸಿಕೊಂಡಿದ್ದರು. ಕರಾವಳಿ ಕರ್ನಾಟಕದ ಯಕ್ಷಗಾನ, ಜಾನಪದ, ಭೂತಾರಾಧನೆ ಕ್ಷೇತ್ರದಲ್ಲಿ ಸಾಕಷ್ಟು ಸಂಶೋಧನೆ ನಡೆಸಿ 100ಕ್ಕೂ ಹೆಚ್ಚು ಕೃತಿಗಳನ್ನು ಹೊರತಂದಿದ್ದರು. ತುಳುವಿನಲ್ಲಿ ಕವನ ಸಂಗ್ರಹ, ನಾಟಕ, ಭಕ್ತಿಗೀತೆ, ಭಾವಗೀತೆಗಳನ್ನು ರಚಿಸುವುದರ ಜೊತೆಗೆ ಕನ್ನಡ ಸಾಹಿತ್ಯದ ವಿವಿಧ ವಿಭಾಗಗಳಲ್ಲಿ ಅಪಾರ ಕೊಡುಗೆಗಳನ್ನು ನೀಡಿದ್ದರು. ಕನ್ನಡ ಸಂಘ, ಯಕ್ಷಗಾನ ಸಂಘಗಳನ್ನು ಆರಂಭಿಸಿ ಭಾಷೆಗಳ ಬೆಳವಣಿಗೆಗಾಗಿ ಶ್ರಮಿಸಿದ್ದ ಶ್ರೀಯುತರು ಭಾಷಾ ಸಮ್ಮಾನ್ ಪ್ರಶಸ್ತಿಗೆ ಭಾಜನರಾಗಿರುತ್ತಾರೆ. ಧರ್ಮಸ್ಥಳ ಯಕ್ಷಗಾನ ಮೇಳಕ್ಕೆ 30ಕ್ಕೂ ಹೆಚ್ಚು ಯಕ್ಷಗಾನ ಪ್ರಸಂಗಗಳನ್ನು ರಚಿಸಿದ್ದಾರೆ. ಸಾಹಿತ್ಯ ಕ್ಷೇತ್ರಕ್ಕೆ ನೀಡಿದ ಅಪಾರ ಕೊಡುಗೆಗಾಗಿ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಮಂಗಳೂರು ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪ್ರಶಸ್ತಿಗಳಲ್ಲದೆ ಇತರೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಸಾಹಿತಿ ಒಬ್ಬರನ್ನು ಕಳೆದುಕೊಂಡಂತಾಗಿದೆ.

## 05. ಗುರುಲಿಂಗಪ್ಪ ವೀರಸಂಗಪ್ಪ ಕರಡಿ

ಹಿರಿಯ ಜಾನಪದ ಹಾಗೂ ಕರಡಿ ಮಜಲು ಕಲಾವಿದರಾದ ಗುರುಲಿಂಗಪ್ಪ ವೀರಸಂಗಪ್ಪ ಕರಡಿ ಅವರು ದಿನಾಂಕ:09.01.2024ರಂದು ನಿಧನ ಹೊಂದಿರುತ್ತಾರೆ.

1939ರ ಆಗಸ್ಟ್, 01ರಂದು ಬಾಗಲಕೋಟೆ ಜಿಲ್ಲೆಯ ಮಹಾಲಿಂಗಾಪುರದಲ್ಲಿ ಜನಿಸಿದ್ದ ಶ್ರೀಯುತರು ಕುಲಕಸುಬಾದ ನೇಕಾರಿಕೆಯನ್ನು ವೃತ್ತಿಯನ್ನಾಗಿಸಿಕೊಂಡಿದ್ದರು. ಜಾನಪದ ಕಲೆಗಳಲ್ಲಿ ಅತೀವ ಆಸಕ್ತಿ ಹೊಂದಿದ್ದು, ಡೊಳ್ಳಿನ ಕಲೆ ಮತ್ತು ಕರಡಿ ಮಜಲು ಕಲಾವಿದರಾಗಿದ್ದ ಶ್ರೀಯುತರು ರಾಷ್ಟ್ರಾದ್ಯಂತ ವಿವಿಧ ಸ್ಥಳಗಳಲ್ಲಿ ತಿಂಗಳುಗಟ್ಟಲೆ ಕಾರ್ಯಕ್ರಮ ನೀಡಿದ ಕೀರ್ತಿ ಇವರದ್ದಾಗಿರುತ್ತದೆ. ಆರು ದಶಕಗಳ ಕಾಲ ತಮ್ಮ ಜೀವನವನ್ನು ಕಲಾ ಸೇವೆಗಾಗಿ ಮುಡುಪಾಗಿಟ್ಟಿದ್ದ ಶ್ರೀಯುತರು ಕರ್ನಾಟಕ ಜಾನಪದ ಅಕಾಡೆಮಿ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗಳಲ್ಲದೆ ಇತರೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಜಾನಪದ ಹಾಗೂ ಕರಡಿ ಮಜಲು ಕಲಾವಿದರೊಬ್ಬರನ್ನು ಕಳೆದುಕೊಂಡಂತಾಗಿದೆ.

ಸಭಾನಾಯಕರು ಹಾಗೂ ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:-

ಮೃತರುಗಳ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರುಗಳ ಗೌರವಾರ್ಥ ಮಾನ್ಯ ಶಾಸಕರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಮೌನ ಆಚರಿಸಿದ ನಂತರ)

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.

# ಕರ್ನಾಟಕ ವಿಧಾನ ಪರಿಷತ್ತು
## 152ನೇ ಅಧಿವೇಶನ
## ಸಂತಾಪ ಸೂಚನೆ

ಮಾನ್ಯ ಸಭಾಪತಿಯವರು:-

ಖ್ಯಾತ ಸಂವಿಧಾನಿಕ ನ್ಯಾಯಶಾಸ್ತ್ರಜ್ಞ ಮತ್ತು ಸುಪ್ರೀಂ ಕೋರ್ಟ್‌ನ ಹಿರಿಯ ವಕೀಲರಾಗಿದ್ದ ಫಾಲಿ ಎಸ್ ನಾರಿಮನ್ ಅವರು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.

### ಫಾಲಿ ಎಸ್ ನಾರಿಮನ್

ಸುಪ್ರೀಂ ಕೋರ್ಟ್‌ನ ಹಿರಿಯ ವಕೀಲರು ಹಾಗೂ ಕಾವೇರಿ ವಿಚಾರದಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿದ್ದ ಫಾಲಿ ಎಸ್ ನಾರಿಮನ್ ಅವರು ದಿನಾಂಕ: 21.02.2024ರಂದು ನಿಧನ ಹೊಂದಿರುತ್ತಾರೆ.

1929ರ ಜನವರಿ 10ರಂದು ಮ್ಯಾನ್ಮಾರ್‌ನ ರಾಜಧಾನಿ ರಂಗೂನ್ ಪಟ್ಟಣದಲ್ಲಿ ಜನಿಸಿದ್ದ ಶ್ರೀಯುತರು ಮುಂಬೈನ ಸೇಂಟ್ ಕ್ಸೇವಿಯರ್ ಕಾಲೇಜಿನಲ್ಲಿ ಅರ್ಥಶಾಸ್ತ್ರ ಮತ್ತು ಇತಿಹಾಸದಲ್ಲಿ ಬಿ.ಎ. ಪದವೀಧರರಾಗಿದ್ದು, ಮುಂಬೈನ ಸರ್ಕಾರಿ ಕಾನೂನು ಕಾಲೇಜಿನಲ್ಲಿ ಕಾನೂನು ಪದವಿಯನ್ನು ಪಡೆದಿದ್ದರು. 1950ರಲ್ಲಿ ಬಾಂಬೆ ಹೈಕೋರ್ಟ್‌ನ ವಕೀಲರಾಗಿ ಕಾರ್ಯನಿರ್ವಹಿಸಿದ್ದ ಶ್ರೀಯುತರು 1971ರಲ್ಲಿ ಸುಪ್ರೀಂ ಕೋರ್ಟ್‌ನ ಹಿರಿಯ ವಕೀಲರಾಗಿ ನೇಮಕಗೊಂಡಿದ್ದರು. ಭಾರತದ ಹೆಚ್ಚುವರಿ ಸಾಲಿಸಿಟರ್ ಜನರಲ್ ಆಗಿ ನೇಮಕಗೊಂಡಿದ್ದ ಶ್ರೀಯುತರು ಪ್ರಧಾನಿ ಇಂದಿರಾಗಾಂಧಿ ಅವರು ಘೋಷಿಸಿದ್ದ ತುರ್ತು ಪರಿಸ್ಥಿತಿಯನ್ನು ವಿರೋಧಿಸಿ ಸದರಿ ಹುದ್ದೆಗೆ ರಾಜೀನಾಮೆ ನೀಡಿದ್ದರು. 25 ವರ್ಷಗಳ ಕಾಲ ಕಾವೇರಿ ವಿವಾದದಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿ, ಕಾವೇರಿ ನೀರಿನ ಹರಿವು 380 ಟಿಎಂಸಿ ಯಿಂದ 192 ಟಿಎಂಸಿಗೆ ಇಳಿಸಿದ ಸಾಧನೆ ಹಾಗೂ ಮೂರು ದಶಕಗಳಿಂದ ಕೃಷ್ಣಾ, ಕಾವೇರಿ, ಮಹದಾಯಿ ಸೇರಿದಂತೆ ಅಂತರರಾಜ್ಯ ನದಿ ನೀರು ಹಂಚಿಕೆಯ ಎಲ್ಲಾ ವ್ಯಾಜ್ಯಗಳಲ್ಲಿ ರಾಜ್ಯದ ಪರ ವಾದಿಸಿದ್ದ ಶ್ರೀಯುತರು ಅಂತರರಾಷ್ಟ್ರೀಯ ಮಟ್ಟದಲ್ಲಿ ಜಲತಜ್ಞರೆಂದು ಖ್ಯಾತಿ ಹೊಂದಿದ್ದರು.

---2

ಜನ ಸಾಮಾನ್ಯರಿಗಾಗಿ ತಮ್ಮ ಜೀವಮಾನವನ್ನೇ ಮುಡುಪಾಗಿಟ್ಟಿದ್ದ ಶ್ರೀಯುತರು 1991ರಲ್ಲಿ ಪದ್ಮಭೂಷಣ ಮತ್ತು 2007ರಲ್ಲಿ ಪದ್ಮವಿಭೂಷಣ ಸೇರಿದಂತೆ ಇತರೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

ಶ್ರೀಯುತರ ನಿಧನದಿಂದಾಗಿ ರಾಷ್ಟ್ರವು ಖ್ಯಾತ ಸಂವಿಧಾನಿಕ ನ್ಯಾಯಶಾಸ್ತ್ರಜ್ಞ ಹಾಗೂ ಹಿರಿಯ ವಕೀಲರೊಬ್ಬರನ್ನು ಕಳೆದುಕೊಂಡಂತಾಗಿದೆ.

<u>ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:-</u>

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಮೌನ ಆಚರಿಸಿದ ನಂತರ)

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.

ಕರ್ನಾಟಕ ವಿಧಾನ ಪರಿಷತ್ತು
152ನೇ ಅಧಿವೇಶನ
ಸಂತಾಪ ಸೂಚನೆ

ಮಾನ್ಯ ಸಭಾಪತಿಯವರು:-

ವಿಧಾನ ಸಭೆಯ ಹಾಲಿ ಶಾಸಕರಾದ ಶ್ರೀ ರಾಜಾ ವೆಂಕಟಪ್ಪ ನಾಯಕ ಅವರು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.

ರಾಜಾ ವೆಂಕಟಪ್ಪ ನಾಯಕ

ಯಾದಗಿರಿ ಜಿಲ್ಲೆಯ ಶೋರಾಪುರ ವಿಧಾನ ಸಭಾಕ್ಷೇತ್ರದ ಹಾಲಿ ಶಾಸಕರಾದ ರಾಜಾ ವೆಂಕಟಪ್ಪ ನಾಯಕ ಅವರು ದಿನಾಂಕ: 25.02.2024ರಂದು ನಿಧನ ಹೊಂದಿರುತ್ತಾರೆ.

1957ರ ನವೆಂಬರ್ 23ರಂದು ಯಾದಗಿರಿ ಜಿಲ್ಲೆಯ ಶೋರಾಪುರದಲ್ಲಿ ಜನಿಸಿದ್ದ ಶ್ರೀಯುತರು ವೃತ್ತಿಯಲ್ಲಿ ಕೃಷಿಕರಾಗಿದ್ದು. ವೈದ್ಯಕೀಯ ವಿದ್ಯಾಭ್ಯಾಸದ ಅಂತಿಮ ವರ್ಷವನ್ನು ತ್ಯಜಿಸಿ, 1987ರಲ್ಲಿ ಪೇಠ ಅಮ್ಮಾಪುರ ಮಂಡಲ ಪಂಚಾಯಿತಿಯ ಪ್ರಧಾನರಾಗಿ ರಾಜಕೀಯವನ್ನು ಪ್ರವೇಶಿಸಿದ್ದ ಇವರು 1994, 1999, 2013 ಹಾಗೂ 2023ರಲ್ಲಿ 4 ಬಾರಿ ಯಾದಗಿರಿ ಜಿಲ್ಲೆಯ ಶೋರಾಪುರ ವಿಧಾನ ಸಭಾ ಕ್ಷೇತ್ರದ ಶಾಸಕರಾಗಿ ಆಯ್ಕೆಯಾಗಿ ಸೇವೆ ಸಲ್ಲಿಸಿದ್ದ ಶ್ರೀಯುತರು ಕ್ಷೇತ್ರದ ಅಭಿವೃದ್ಧಿ, ಜನರ ಸಮಸ್ಯೆಗಳ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿದ್ದ ಇವರು ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷರಾಗಿದ್ದರು.

ಶ್ರೀಯುತರ ನಿಧನದಿಂದಾಗಿ ರಾಜ್ಯವು ಒಬ್ಬ ಹಿರಿಯ ಸಜ್ಜನ ಶಾಸಕರನ್ನು ಕಳೆದುಕೊಂಡಂತಾಗಿದೆ.

--2

**<u>ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:-</u>**

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.